# 4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
# ತುಮಕೂರು-ಮಧುಗಿರಿ

**ಎಸ್.ಸಿ.ಸಂಖ್ಯೆಃ** 5016/2025 ಫ್ರಾಸಾ-05
ಚಾಸಾ-08

ದಿನಾಂಕಃ 20-12-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| **ಹೆಸರು** | ದೇವರಾಜು |
| **ತಂದೆಯ / ಗಂಡನ ಹೆಸರು** | ಕಾವಲಪ್ಪ |
| **ವಯಸ್ಸು** | 38 |
| **ಉದ್ಯೋಗ** | ಅಡಿಗೆ ಕೆಲಸ |
| **ವಾಸಸ್ಥಳ** | ಸೊಣ್ಣೇನಹಳ್ಳಿ |

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-**

ನಿಪಿ-7 ರ ಮೇಲೆ ನನ್ನ ಸಹಿ ಇದೆ ಅದನ್ನು ಗುರುತಿಸುತ್ತೇನೆ ಸಾಕ್ಷಿ ಸಹಿಯನ್ನು ನಿಪಿ-7(ಸಿ) ಎಂದು ಗುರುತಿಸಲಾಯಿತು. ನಿಪಿ-7 ಕ್ಕೆ ನಾನು ಸುಮಾರು ಒಂದು ವರೆ ವರ್ಷದ ಹಿಂದೆ ಕೊರಟರೆಗೆ ಪೊಲೀಸ್ ಠಾಣೆಗೆ ಸಹಿ ಮಾಡಿರುತ್ತೇನೆ. ಪೊಲೀಸರು ಯಾವ ವಿಚಾರಕ್ಕೆ ನನ್ನ ಸಹಿ ತೆಗೆದುಕೊಂಡಿರುತ್ತಾರೆಂದು ನನಗೆ ಗೊತ್ತಿಲ್ಲ, ನನ್ನ ಸಮಕ್ಷಮ ಪೊಲೀಸರು ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಿಪಿ-7 ರಲ್ಲಿ ಬರೆದ ವಿಷಯ ನನಗೆ ಗೊತ್ತಿರುವುದಿಲ್ಲ. ನಿಪಿ-11 ಪೊಟೋ ನೋಡಿ ಗುರುತಿಸಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ. ನಿಪಿ-11 ರಲ್ಲಿ ಯಾರು ಏನನ್ನು ಹಾಜರುಪಡಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ಬಿಳಿ ಬಟ್ಟೆಯ ಪ್ಯಾಕ್ ಮೇಲೆ ಅಂಟಿಸಿರುವ ಚೀಟಿಯಲ್ಲಿ ತಮ್ಮ ಸಹಿ ಇದೆ ಎಂದು ಗುರುತಿಸಿರುತ್ತಾರೆ. ಸದರಿ ಬಿಳಿ ಬಟ್ಟೆಯ ಪ್ಯಾಕ್ ನಲ್ಲಿ ಏನು ಇದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿಸಲಾಯಿತು)**

**<u>ಪಾಟೀಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ-</u>**

ದಿ. 29.04.2024 ರಂದು ಬೆಳಿಗ್ಗೆ 10-30 ರಿಂದ 11-15 ಗಂಟೆಯವರೆಗೆ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಚಾಸಾ-2 ರವರು ಕೃತ್ಯ ನಡೆದ ಸಮಯದಲ್ಲಿ ಧರಿಸಿದ್ದ ಬಟ್ಟೆಯನ್ನು ಚಾಸಾ-3 ರವರು ಹಾಜರುಪಡಿಸಿದ್ದು ಸದರಿ ಬಟ್ಟೆಗಳನ್ನು ನಮ್ಮ ಸಮಕ್ಷಮ ನಿಪಿ-7 ರಂತೆ ಪಂಚನಾಮೆ ಮಾಡಿ ಅಮಾನತ್ತುಪಡಿಸಿಕೊಂಡು ನನ್ನ ಸಹಿ ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲಕ್ಕೆ ನಿಪಿ-11 ರಂತೆ ಫೊಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿದ್ದರೂ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**